ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ: 22ನೇ ಜುಲೈ, 2019

ಕ್ರೈಸ್ ವತಿಯಿಂದ ನಡೆಯುತ್ತಿರುವ ಬಿ.ಸಿ.ಎಂ. ವಸತಿ ಶಾಲೆಗಳ ಬಗ್ಗೆ

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) -

90 (478) ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ (ಕ್ರೈಸ್) ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕುಮಾರನಾಯಕ್ ವರದಿಯಂತೆ ಸದರಿ ನೌಕರರುಗಳಿಗೆ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರುವುದಕ್ಕೆ ಕಾರಣಗಳೇನು;

(ಇ) ಕ್ರೈಸ್ ಅಧೀನದಲ್ಲಿ ನಡೆಯುತ್ತಿದ್ದ ಅಲ್ಪಸಂಖ್ಯಾತರ ವಸತಿ ಶಾಲೆಗಳನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸಿದಂತೆ ಬಿ.ಸಿ.ಎಂ. ಮೊರಾರ್ಜಿ/ರಾಣಿಚೆನ್ನಮ್ಮ ವಸತಿ ಶಾಲೆಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ವಿಲೀನಗೊಳಿಸಿ ಸದರಿ ನೌಕರರುಗಳಿಗೆ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು ;